ದಿಃ 06.08.2026

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 1551/2021**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಅಶ್ಫಕ್ ಅಹಮ್ಮದ್ ಖಾನ್ | ಪ್ರಾ.ಸಾಃ5 |
| ತಂದೆಯ/ಗಂಡನ ಹೆಸರು | : | ಜಾವೀದ್ ಅಹಮ್ಮದ್ ಖಾನ್ | ಚಾಸಾಃ5 |
| ವಯಸ್ಸು | : | 34 ವರ್ಷ | |
| ಕೆಲಸ | : | ವ್ಯಾಪಾರ | ಸಾ ಪ್ರ ಬೋ |
| ವಾಸ | : | ಭದ್ರಾವತಿ | ದಿಃ06.08.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಚಾಸಾ.4 ರವರು ಗೊತ್ತು. ಸಾಕ್ಷಿ ನಿಪಿ.12 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ನಿಪಿ.12(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಸುಮಾರು 5-6 ವರ್ಷಗಳ ಹಿಂದೆ ಮಾಡಿರುತ್ತೇನೆ. ಅಪಘಾತದ ವಿಚಾರದ ಕುರಿತು ಸಹಿ ಮಾಡಿದ್ದೆನು. ನನ್ನ ಸಮಕ್ಷಮ ಯಾವುದೇ ವಾಹನ ಅಮಾನತ್ತು ಪಂಚನಾಮೆಯನ್ನು ಮಾಡಿಲ್ಲ. ನನ್ನ ಬಳಿ ಒಂದು ಸಹಿಯನ್ನು ಪಡೆದುಕೊಂಡು, ಒಂದು ಛಾಯಾಚಿತ್ರವನ್ನು ತೆಗೆದಿದ್ದರು. ಸಾಕ್ಷಿ ನಿಪಿ.5 ಮತ್ತು 6 ರ ಛಾಯಾಚಿತ್ರಗಳಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ನನ್ನ ಸಮಕ್ಷಮದಲ್ಲಿ ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸದರಿ ಸಮಯದಲ್ಲಿ ನನ್ನೊಂದಿಗೆ ಚಾಸಾ. 4 ರವರು ಇದ್ದರು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

2. ದಿನಾಂಕ 15.05.2021 ರಂದು ಹೊಳಲ್ಕೆರೆ ಪೊಲೀಸ್ ವಸತಿ ಗೃಹಗಳ ಆವರಣದಲ್ಲಿ ನನ್ನ ಮತ್ತು ಚಾಸಾ. 4 ರವರ ಸಮಕ್ಷಮ ಮದ್ಯಾಹ್ನ 1 ರಿಂದ 1.45 ರವರೆಗೆ ಕೆ.ಎ.25-ಎಎ-3498 ರ ಲಾರಿಯನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಅಮಾನತ್ತು ಪಂಚನಾಮೆಯ ಕಾಲಕ್ಕೆ ಉಪಸ್ಥಿತನಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ದಿಃ 06.08.2026

**<u>ಪಾಟೀ ಸವಾಲುಃ  ಆರೋಪಿತರ ಪರ ವಕೀಲರಿಂದಃ- ಇಲ್ಲ</u>**

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು. )

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊಳಲ್ಕೆರೆ